ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : * ವಿಧೇಯಕವನ್ನು ಮಂಡಿಸಲಾಗಿದೆ.*

2) ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕ 2004.

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆಳ "2004ರ" ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : * ವಿಧೇಯಕವನ್ನು ಮಂಡಿಸಲಾಗಿದೆ.*

3) ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕ, 2004

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

---

* ಅನುಬಂಧ I
* ಅನುಬಂಧ II
* ಅನುಬಂಧ III

ಅಧ್ಯಕ್ಷರು : * ವಿಧೇಯಕವನ್ನು ಮಂಡಿಸಲಾಗಿದೆ.*

4) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2004

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : * ವಿಧೇಯಕವನ್ನು ಮಂಡಿಸಲಾಗಿದೆ.*

5) ಕರ್ನಾಟಕ ಕೆಲವು ಸರಕುಗಳ ಪ್ರದೇಶದ ಮೇಲೆ ವಿಶೇಷ ತೆರಿಗೆ ವಿಧೇಯಕ, 2004 ಮಂಡನೆ ಅನುಮತಿ ಕೋರಿಕೆ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2004ನೇ ಸಾಲಿನ ಕರ್ನಾಟಕ ಕೆಲವು ಸರಕುಗಳ ಪ್ರವೇಶದ ಮೇಲೆ ವಿಶೇಷ ತೆರಿಗೆ ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ನೇ ಸಾಲಿನ ಕರ್ನಾಟಕ ಕೆಲವು ಸರಕುಗಳ ಪ್ರವೇಶದ ಮೇಲೆ ವಿಶೇಷ ತೆರಿಗೆ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2004ನೇ ಸಾಲಿನ ಕರ್ನಾಟಕ ಕೆಲವು ಸರಕುಗಳ ಪ್ರವೇಶದ ಮೇಲೆ ವಿಶೇಷ ತೆರಿಗೆ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : * ವಿಧೇಯಕವನ್ನು ಮಂಡಿಸಲಾಗಿದೆ.*

ಅಧ್ಯಕ್ಷರು : ಈಗ ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

ಶ್ರೀ ಜೆ.ಸಿ. ಮಾಧುಸ್ವಾಮಿ : ಮಾನ್ಯ ಅಧ್ಯಕ್ಷರೆ, ಈ ರೀತಿ ಕೇಳುವುದಕ್ಕಿಂತ ಒಂದೇ ಸಾರಿ ಹೌದು ಎಂದರೆ ಎಲ್ಲಾ ವಿಧೇಯಕಗಳನ್ನು ಪಾಸ್ ಆಗುತ್ತವೆ. ಆದ್ದರಿಂದ, ಕಥೆ ಕೇಳಿಕೊಂಡು ಇಲ್ಲಿ ಏಕೆ ಕುಳಿತುಕೊಳ್ಳಬೇಕು?

---

* ಅನುಬಂಧ IV

 * ಅನುಬಂಧ V